ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿ ಹೆರಿಗೆ ಆಸ್ಪತ್ರೆಯ ಕಟ್ಟಡವನ್ನು ಎಷ್ಟು ವರ್ಷಗಳ ಹಿಂದೆ ಕಟ್ಟಲಾಗಿತ್ತು;

ಆ) ಈ ಆಸ್ಪತ್ರೆಯಲ್ಲಿ ಪ್ರತಿ ತಿಂಗಳು ಸರಾಸರಿ ಎಷ್ಟು ಹೆರಿಗೆಗಳು ಆಗುತ್ತಿವೆ;

ಇ) ಈ ಆಸ್ಪತ್ರೆಯ ಕಟ್ಟಡವು ಬಹಳ ಹಳೆಯದಾಗಿದ್ದು ಅದನ್ನು ಕೆಡವಿ ಅದೇ ಸ್ಥಳದಲ್ಲಿ ಹೊಸ ಕಟ್ಟಡ ಕಟ್ಟಲು ಮುಖ್ಯ ವಾಸ್ತುಶಿಲ್ಪಿಗಳ ಪ್ರಕಾರ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದವರು ನೀಲಿ ನಕ್ಷೆಯನ್ನು ತಯಾರಿಸಿದ್ದು ಈಗ ಆ ಕಟ್ಟಡದ ಮಂಜೂರಾತಿ ಮಾಡುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

ಈ) ಈ ಕೆಲಸಕ್ಕೆ ಎಷ್ಟು ವೆಚ್ಚ ತಗಲುವುದು. ಇದಕ್ಕೆ ಯಾವ ರೀತಿಯಾಗಿ ಹಣಕಾಸಿನ ವ್ಯವಸ್ಥೆಯನ್ನು ಮಾಡಲಾಗಿದೆ.

ಉ) ಈ ಕೆಲಸಕ್ಕೆ ಸುಮಾರು 90 ಲಕ್ಷ ರೂಪಾಯಿಗಳು ಬೇಕಾಗುತ್ತಿದ್ದು ಅದು ಜಿಲ್ಲಾ ಪಂಚಾಯಿತಿಯಿಂದ ಒದಗಿಸಲು ಸಾಧ್ಯವಾಗದೇ ಇರುವುದರಿಂದ ಈ ಕೆಲಸವನ್ನು ರಾಜ್ಯದ ಬೇರೆ ಯಾವುದೇ ಯೋಜನೆ ಅಡಿಯಲ್ಲಿ ತೆಗೆದುಕೊಂಡು ಕಟ್ಟಡದ ಕೆಲಸವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಸುಮಾರು 50 ವರ್ಷಗಳ ಹಿಂದೆ ಕಟ್ಟಲಾಗಿರುತ್ತದೆ

ಆ) 32

ಇ) ಜಿಲ್ಲಾ ಪಂಚಾಯತ್‌ನಿಂದ ಪ್ರಸ್ತಾವನೆ ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಹಣದ ಕೊರತೆಯಿಂದ ಸದ್ಯದಲ್ಲಿ ಸಾಧ್ಯವಾಗುವುದಿಲ್ಲ.

ಬೆಳಗಾಂ ಜಿಲ್ಲೆಯಲ್ಲಿನ ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯಗಳ ನಿರ್ಮಾಣ

2564(2962) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) :— ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಆ. ಗ್ರಾಮೀಣ ಪ್ರದೇಶದಲ್ಲಿ ಶೌಚಾಲಯಗಳನ್ನು ಕಟ್ಟುವ ಸಲುವಾಗಿ ಯಾವ ಯಾವ ಸವಲತ್ತುಗಳನ್ನು ಸರ್ಕಾರದವರು ಕೊಡುತ್ತಿದ್ದಾರೆ;

ಆ. ಸರ್ಕಾರದವರು ಶೌಚಾಲಯಗಳಿಗೆ ಕೊಡುತ್ತಿರುವ ಹಣವು ಸಾಲದೇ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ. ಹಾಗಿದ್ದಲ್ಲಿ, ಶೌಚಾಲಯ ಕಟ್ಟಲು ಈಗ ಕೊಡುತ್ತಿರುವ ಮೊತ್ತವನ್ನು ಹೆಚ್ಚಿಸಿ ಅದನ್ನು ಪ್ರತಿಯೊಂದು ಶೌಚಾಲಯಕ್ಕೆ 5000 ರೂಪಾಯಿಗೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದೇ;

ಈ. ಬೆಳಗಾಂವ ಜಿಲ್ಲೆಯಲ್ಲಿ ಕಳೆದ ವರ್ಷ ಎಷ್ಟು ಶೌಚಾಲಯಗಳನ್ನು ಕಟ್ಟಲು ಗುರಿ ನಿಗದಿಪಡಿಸಲಾಗಿತ್ತು; ಎಷ್ಟು ಶೌಚಾಲಯಗಳನ್ನು ಕಟ್ಟಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

ಉ. ಕಳೆದ ವರ್ಷ ಬೆಳಗಾಂವ ಜಿಲ್ಲೆ ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಎಷ್ಟು ಶೌಚಾಲಯಗಳನ್ನು ಕಟ್ಟಲು ಗುರಿ ನಿಗದಿಪಡಿಸಲಾಗಿತ್ತು; ಎಷ್ಟು ಶೌಚಾಲಯಗಳನ್ನು ಕಟ್ಟಲಾಗಿದೆ?

ಶ್ರೀ ಎಂ.ವೈ ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :—

ಆ. ಗ್ರಾಮೀಣ ಪ್ರದೇಶಗಳಲ್ಲಿ ವೈಯಕ್ತಿಕ ಕೌಟುಂಬಿಕ ಶೌಚಾಲಯಗಳನ್ನು ಕಟ್ಟಿಕೊಳ್ಳಲು ನಿರ್ಮಲ ಗ್ರಾಮ ಯೋಜನೆಯಡಿ ಬಡತನ ರೇಖೆಗಿಂತ ಕೆಳಗಿನ ಫಲಾನುಭವಿಗಳಿಗೆ ಘಟಕ ಒಂದಕ್ಕೆ ರೂ.೨೦೦೦/- ಗಳ ಸಹಾಯಧನವನ್ನು ಮತ್ತು ಬಡತನ ರೇಖೆಗಿಂತ ಮೇಲಿನ ಫಲಾನುಭವಿಗಳಿಗೆ ಘಟಕ ಒಂದಕ್ಕೆ ರೂ.೧೨೦೦/- ಗಳ ಸಹಾಯಧನವನ್ನು ನೀಡಲಾಗುತ್ತಿದೆ.

ಆ. ಕಡಿಮೆ ವೆಚ್ಚದ ಕೌಟುಂಬಿಕ ಶೌಚಾಲಯದ ನಿರ್ಮಾಣಕ್ಕಾಗಿ ಘಟಕ ವೆಚ್ಚವನ್ನು ರೂ.೨೫೦೦/-ಗೆ ಸೀಮಿತಗೊಳಿಸಿದ್ದು ಸದರಿ ಘಟಕ ವೆಚ್ಚದ ಆಧಾರದ ಮೇಲೆ ಸಹಾಯಧನವನ್ನು ನಿಗದಿಪಡಿಸಲಾಗಿದೆ. ಇನ್ನುಳಿದ ಹಣವನ್ನು ಫಲಾನುಭವಿಗಳೇ ಭರಿಸಬೇಕಾಗುತ್ತದೆ.

ಇ. ಸದ್ಯ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಈ. ವಿವರಗಳನ್ನು ಅನುಬಂಧ-೧ ರಲ್ಲಿ ನೀಡಲಾಗಿದೆ.

ಉ. ವಿವರಗಳನ್ನು ಅನುಬಂಧ-೧ ರಲ್ಲಿ ನೀಡಲಾಗಿದೆ.

ಅನುಬಂಧ -1

ವಿಧಾನ ಸಭೆ ಚುಕ್ಕೆರಹಿತ ಪ್ರಶ್ನೆ ಸಂಖ್ಯೆ 2962 ರ ಉತ್ತರದ ಲಗತ್ತು

ನಿರ್ಮಲ ಗ್ರಾಮ ಯೋಜನೆಯಡಿ 20001-01ನೇ ಸಾಲಿನಲ್ಲಿ ವೈಯಕ್ತಿಕ ಕೌಟುಂಬಿಕ ಶೌಚಾಲಯಗಳ ನಿರ್ಮಾಣಕ್ಕಾಗಿ ಬೆಳಗಾವಿ ಜಿಲ್ಲೆಗೆ ನಿಗದಿಪಡಿಸಿದ ತಾಲ್ಲೂಕುವಾರು ಗುರಿ ಮತ್ತು ಸಾಧನೆಯ ವಿವರಗಳು

ಕ್ರಮ ಸಂಖ್ಯೆ	ತಾಲ್ಲೂಕು	ಗುರಿ	ಸಾಧನೆ
1.	ಅಥಣಿ	590	856
2.	ಬೈಲಹೊಂಗಲ	590	829
3.	ಬೆಳಗಾವಿ	2840	2839
4.	ಚಿಕ್ಕೋಡಿ	745	855
5.	ಗೋಕಾಕ್	590	112
6.	ಹುಕ್ಕೇರಿ	590	139
7.	ಖಾನಾಪುರ	849	1259
8.	ರಾಮದುರ್ಗ	410	407
9.	ರಾಯಭಾಗ್	390	855
10.	ಸವದತ್ತಿ	305	504
	ಒಟ್ಟು	8093	8655

ಬೈಲಹೊಂಗಲ ತಾಲ್ಲೂಕಿನ ದೂದವಾಡ ಗ್ರಾಮದಲ್ಲಿ ಸರ್ಕಾರಿ ಐ.ಟಿ.ಐ ಕಾಲೇಜು ಪ್ರಾರಂಭ

2565(2963) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಳಗಾಂವ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೂದವಾಡ ಗ್ರಾಮದಲ್ಲಿ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಮಹಾ ವಿದ್ಯಾಲಯ ಇರುವ ಸಂಗತಿ ನಿಜವೇ, ಈ ಮಹಾ ವಿದ್ಯಾಲಯದಲ್ಲಿ ಕಲಾ ಮತ್ತು ವಿಜ್ಞಾನ ವಿಭಾಗಗಳು ನಡೆಯುತ್ತಿದ್ದ ಸಂಗತಿ ನಿಜವೇ?